ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/160/ಸ್ವಚ್ಛತೆ/2017-18

ದಿನಾಂಕ:10/11/2017.

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ದಿನಾಂಕ: 27.08.2014, 01.12.2014 ಮತ್ತು 31.10.2015.

* * * * * *

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ "ಸ್ವಚ್ಛ ಭಾರತ ಅಭಿಯಾನ" ಕಾರ್ಯಕ್ರಮವನ್ನು ಶಾಲಾ-ಕಾಲೇಜುಗಳ ಮೂಲಕ ಸಾಧಿಸುವ ಆಶಯ ಹೊಂದಲಾಗಿದ್ದು, ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳಲ್ಲಿರುವ ಶೌಚಾಲಯಗಳೂ ಸೇರಿದಂತೆ, ತರಗತಿ ಕೊಠಡಿಗಳು, ಕಾಲೇಜಿನ ಆವರಣದ ಸ್ವಚ್ಛತೆಗೆ ಆದ್ಯತೆ ನೀಡುವಂತೆಯೂ ಹಾಗೂ ಸ್ವಚ್ಛತೆಯ ಬಗ್ಗೆ ಕಡ್ಡಾಯವಾಗಿ ಪ್ರತಿ ದಿನ ಪರಿಶೀಲಿಸಿ, ಮೇಲ್ವಿಚಾರಣೆ ನಡೆಸಲು ಕಾಲೇಜಿನ ದೈಹಿಕ ಶಿಕ್ಷಣ ಬೋಧಕರು / ಎನ್.ಎಸ್.ಎಸ್. ಅಧಿಕಾರಿಗಳು/ವಿದ್ಯಾರ್ಥಿ ಕಲ್ಯಾಣ ಅಧಿಕಾರಿಗಳು ಇವರನ್ನು ನೇಮಿಸಿ, ಕಾಲೇಜಿನ ಶುಚಿತ್ವವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ಪ್ರತಿ ಕಾಲೇಜುಗಳಲ್ಲಿ ಎಲ್ಲಾ ವಿದ್ಯಾರ್ಥಿಗಳು ಎನ್.ಸಿ.ಸಿ. ಹಾಗೂ ಎನ್.ಎಸ್.ಎಸ್. ವಿದ್ಯಾರ್ಥಿಗಳೊಂದಿಗೆ ವಾರದಲ್ಲಿ ಒಂದು ದಿನ ಸ್ವಚ್ಛತಾ ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಕಛೇರಿಯ ಉಲ್ಲೇಖಿತ ಸುತ್ತೋಲೆಗಳಲ್ಲಿ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿರುತ್ತದೆ.

ಆದಾಗ್ಯೂ ಬಹುತೇಕ ಕಾಲೇಜುಗಳಲ್ಲಿ ಸ್ವಚ್ಛತೆಗೆ ಅಗತ್ಯ ಗಮನಹರಿಸದೇ ಹಾಗೂ ಕಾಲೇಜಿನ ಆವರಣಗಳಲ್ಲಿ ಸಂಗ್ರಹಿಸಲಾದ ಕಸ/ತ್ಯಾಜ್ಯವನ್ನು ನಿಯಮಿತವಾಗಿ ವಿಲೇವಾರಿ ಮಾಡದೇ ಇರುವುದರಿಂದ ಕಸದ ರಾಶಿಗಳಿರುವುದನ್ನು ಗಮನಿಸಲಾಗಿದೆ. ಕಾಲೇಜುಗಳಲ್ಲಿ ಉತ್ಪತ್ತಿಯಾಗುವ ಕಸ/ತ್ಯಾಜ್ಯವನ್ನು ವೈಜ್ಞಾನಿಕವಾಗಿ ಬೇರ್ಪಡಿಸಿ (ಹಸಿ ಮತ್ತು ಒಣ ಕಸ) ಸಂಬಂಧಪಟ್ಟ ಪೌರಾಡಳಿತ ಸಂಸ್ಥೆಗಳ ಮೂಲಕ ನಿಯಮಿತವಾಗಿ ವಿಲೇ ಮಾಡಬೇಕಿರುತ್ತದೆ.

**ಆದ್ದರಿಂದ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳಲ್ಲಿರುವ ಶೌಚಾಲಯಗಳೂ ಸೇರಿದಂತೆ, ತರಗತಿ ಕೊಠಡಿಗಳು, ಕಾಲೇಜಿನ ಆವರಣದ ಸ್ವಚ್ಛತೆಗೆ ಆದ್ಯತೆ ನೀಡುವಂತೆಯೂ ಹಾಗೂ ಸ್ವಚ್ಛತೆಯ ಬಗ್ಗೆ ಕಡ್ಡಾಯವಾಗಿ ಪ್ರತಿ ದಿನ ಪರಿಶೀಲಿಸಿ ಕಾಲೇಜಿನ ಶುಚಿತ್ವವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ಪ್ರತಿ ಕಾಲೇಜುಗಳಲ್ಲಿ ಎಲ್ಲಾ ವಿದ್ಯಾರ್ಥಿಗಳು ಎನ್.ಸಿ.ಸಿ. ಹಾಗೂ ಎನ್.ಎಸ್.ಎಸ್. ವಿದ್ಯಾರ್ಥಿಗಳೊಂದಿಗೆ ವಾರದಲ್ಲಿ ಒಂದು ದಿನ ಸ್ವಚ್ಛತಾ ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಾಂಶುಪಾಲರುಗಳಿಗೆ ಮತ್ತೊಮ್ಮೆ ಸೂಚಿಸಲಾಗಿದೆ.**

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗ.- ತಮ್ಮ ವ್ಯಾಪ್ತಿಯ ಕಾಲೇಜುಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಲು ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.
2. ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ.

**ಪ್ರತಿಯನ್ನು :**

1. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
2. ಕಛೇರಿ ಪ್ರತಿ.